**ಕರ್ನಾಟಕ ಸರ್ಕಾರ**
**ತಾಂತ್ರಿಕ ಶಿಕ್ಷಣ ಇಲಾಖೆ**

ಸಂಖ್ಯೆ: ಬಿಟಿಇ/169/ಇಸಿಎಸ್(3)/2017

ಕಾರ್ಯದರ್ಶಿಯವರ ಕಛೇರಿ
ತಾಂತ್ರಿಕ ಪರೀಕ್ಷಾ ಮಂಡಳಿ
ಅರಮನೆ ರಸ್ತೆ, ಬೆಂಗಳೂರು-01
ದಿನಾಂಕ: 07.04.2018.

**ಜ್ಞಾಪನ**

ವಿಷಯ : ತಾಂತ್ರಿಕ ಶಿಕ್ಷಣ ಇಲಾಖೆಯ ಅಧೀನಕ್ಕೊಳಪಡುವ ಪಾಲಿಟೆಕ್ನಿಕ್‌ಗಳಲ್ಲಿ ನಡೆಸುವ ಪ್ರೋಗ್ರಾಮ್‌ಗಳಿಗೆ 2017-18 ನೇ ಸಾಲಿಗೆ ತಾಂತ್ರಿಕ ಪರೀಕ್ಷಾ ಮಂಡಳಿಯಿಂದ ಸಂಯೋಜನೆ ಪಡೆಯುವ ಬಗ್ಗೆ.

ಉಲ್ಲೇಖ: ಈ ಕಛೇರಿ ಪತ್ರ ಸಂಖ್ಯೆ: 169/ಇಸಿಎಸ್(3)/2017, ದಿನಾಂಕ: 16.02.2018.

*-*-*-*-*

2017-18 ರ ಸಾಲಿಗೆ ತಾಂತ್ರಿಕ ಪರೀಕ್ಷಾ ಮಂಡಳಿಯಿಂದ ಸಂಯೋಜನೆ ಪಡೆಯುವ ಸಂಬಂಧ ನಿಗದಿತ ಸಂಯೋಜನೆ ಶುಲ್ಕವನ್ನು ಸರ್ಕಾರಿ ಖಜಾನೆಯಲ್ಲಿ ದಿನಾಂಕ: 16.02.2018 ರೊಳಗೆ ಜಮಾ ಮಾಡುವಂತೆ ಉಲ್ಲೇಖದ ಜ್ಞಾಪನದಲ್ಲಿ ತಿಳಿಸಲಾಗಿತ್ತು.

ಈ ಸಂಬಂಧ 2017-18 ನೇ ಸಾಲಿಗೆ ಸಂಯೋಜನಾ ಶುಲ್ಕವನ್ನು ಪಾವತಿ ಮಾಡಿರುವ ವಿವರಗಳನ್ನು ಪರಿಶೀಲಿಸುವ ಸಂಧರ್ಭದಲ್ಲಿ ಕೆಲವು ಸಂಸ್ಥೆಗಳು ಸಂಯೋಜನಾ ಶುಲ್ಕವನ್ನು ಪಾವತಿ ಮಾಡದೇ ಇರುವುದು ಕಂಡುಬಂದಿರುತ್ತದೆ.

ಆದ್ದರಿಂದ 2017-18 ನೇ ಸಾಲಿಗೆ ಸಂಯೋಜನಾ ಶುಲ್ಕವನ್ನು ಇದುವರೆಗೂ ಪಾವತಿ ಮಾಡದೇ ಇರುವ ಸಂಸ್ಥೆಗಳು ದಿನಾಂಕ: 11.04.2018 ರೊಳಗೆ ಸರ್ಕಾರಿ ಖಜಾನೆಗೆ ಜಮಾಮಾಡಲು ಕೊನೆಯ ಅವಕಾಶ ನೀಡಲಾಗಿದೆ ಹಾಗೂ ವಿವರಗಳನ್ನು ದಿನಾಂಕ: 13.04.2018 ರೊಳಗೆ ತಾಂತ್ರಿಕ ಪರೀಕ್ಷಾ ಮಂಡಳಿಗೆ ಸಲ್ಲಿಸುವಂತೆ ಸೂಚಿಸಲಾಗಿದೆ.

ಒಂದು ವೇಳೆ ಸಂಯೋಜನಾ ಶುಲ್ಕವನ್ನು ಪಾವತಿ ಮಾಡಿದ್ದಾಗಿಯೂ ಸದರಿ ವಿವರಗಳನ್ನು ತಾಂತ್ರಿಕ ಪರೀಕ್ಷಾ ಮಂಡಳಿಗೆ ಸಲ್ಲಿಸದೇ ಇದ್ದಲ್ಲಿ, ಅಂತಹ ಸಂಸ್ಥೆಗಳು ದಿನಾಂಕ: 13.04.2018 ರೊಳಗೆ ವಿವರಗಳನ್ನು ಸಲ್ಲಿಸುವಂತೆ ಸೂಚಿಸಲಾಗಿದೆ.

ತಪ್ಪಿದಲ್ಲಿ **ತಾಂತ್ರಿಕ ಪರೀಕ್ಷಾ ಮಂಡಳಿಯಿಂದ ನೀಡಲಾಗುವ ಸಂಯೋಜನೆಯನ್ನು ರದ್ದುಪಡಿಸಲಾಗುವುದು ಹಾಗೂ ಏಪ್ರಿಲ್/ಮೇ 2018 ರ ಪರೀಕ್ಷೆಗೆ ಅವಕಾಶ ಕಲ್ಪಿಸಲಾಗುವುದಿಲ್ಲ** ಎಂದು ಈ ಮೂಲಕ ತಿಳಿಸಲಾಗಿದೆ.

E-Gov
Pl. upload
7/4/18

ಕಾರ್ಯದರ್ಶಿ
ತಾಂತ್ರಿಕ ಪರೀಕ್ಷಾ ಮಂಡಳಿ

ಇವರಿಗೆ : ರಾಜ್ಯದ ಎಲ್ಲಾ ಸರ್ಕಾರಿ ಅನುದಾನಿತ ಹಾಗೂ ಖಾಸಗಿ ಪಾಲಿಟೆಕ್ನಿಕ್‌ಗಳ ಪ್ರಾಚಾರ್ಯರುಗಳಿಗೆ

ಪ್ರತಿ : ಇ-ಆಡಳಿತ-ವೆಬ್‌ಸೈಟ್‌ನಲ್ಲಿ ಪ್ರಕಟಿಸಲು